# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 114 (1021)
2. ಸದಸ್ಯರ ಹೆಸರು : ಶ್ರೀ ಎಂ.ಎಲ್ ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 25.07.2024
4. ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | 2021-2022, 2022-2023, 2023-2024 ಮತ್ತು 2024-2025ನೇ ಸಾಲಿನ ಆಯವ್ಯಯದಲ್ಲಿ ಕೋಲಾರ ಜಿಲ್ಲೆಗೆ ಜಲ ಸಂಪನ್ಮೂಲ ಇಲಾಖೆಗೆ ಸಂಬಂಧಪಟ್ಟಂತೆ ಯಾವ ಯಾವ ಯೋಜನೆಗಳನ್ನು ಘೋಷಣೆ ಮಾಡಲಾಗಿದೆ; (ವಿವರ ನೀಡುವುದು) | ಜಲಸಂಪನ್ಮೂಲ ಇಲಾಖೆಯ ವಿಶ್ವೇಶ್ವರಯ್ಯ ಜಲ ನಿಗಮದ ವ್ಯಾಪ್ತಿಯಲ್ಲಿ ಬರುವ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿ ಬರಪೀಡಿತ 07 ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು, ಹಾಸನ ಹಾಗೂ ಚಿಕ್ಕಮಗಳೂರು ಜಿಲ್ಲೆಗಳ ಪೈಕಿ ಕೋಲಾರ ಜಿಲ್ಲೆ ಒಳಗೊಂಡಿರುತ್ತದೆ. |
| ಆ) | ಕಳೆದ ಮೂರು ವರ್ಷಗಳಿಂದ ಪ್ರಸ್ತುತ ಸಾಲಿನವರೆಗೂ (2024-2025) ಜಲ ಸಂಪನ್ಮೂಲ ಇಲಾಖೆಗೆ ಸಂಬಂಧಪಟ್ಟಂತೆ ಆಯವ್ಯಯದಲ್ಲಿ ಘೋಷಣೆ ಮಾಡಿರುವ ಯೋಜನೆಗಳನ್ನು ಅನುಷ್ಠಾನ ಮಾಡಲಾಗಿದೆಯೇ, ಮಾಡದೇ ಇದ್ದಲ್ಲಿ ಕಾರಣಗಳೇನು; (ವರ್ಷವಾರು ಯೋಜನೆ / ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು) | ಆಯವ್ಯಯಗಳಲ್ಲಿ ಪ್ರತ್ಯೇಕವಾಗಿ ಕೋಲಾರ ಜಿಲ್ಲೆಗೆ ಯಾವುದೇ ಯೋಜನೆಗಳನ್ನು ಘೋಷಣೆ ಮಾಡಿರುವುದಿಲ್ಲ.<br><br>ಕಳೆದ ಮೂರು ವರ್ಷಗಳಿಂದ ಪ್ರಸ್ತುತ ಸಾಲಿನವರೆಗೂ (2024-25) ವಿಶ್ವೇಶ್ವರಯ್ಯ ಜಲ ನಿಗಮಕ್ಕೆ ಸಂಬಂಧಪಟ್ಟಂತೆ ಆಯವ್ಯಯದಲ್ಲಿ ಘೋಷಣೆ ಮಾಡಿರುವ ಯೋಜನೆಗಳನ್ನು ಕೈಗೆತ್ತಿಕೊಂಡು ಅನುಷ್ಠಾನಗೊಳಿಸಲಾಗುತ್ತಿದ್ದು, ವರ್ಷವಾರು ವಿವರಗಳನ್ನು **ಅನುಬಂಧ-1** ರಲ್ಲಿ ಒದಗಿಸಲಾಗಿದೆ. |
| ಇ) | ಎತ್ತಿನಹೊಳೆ ಯೋಜನೆಯ ಉದ್ದೇಶವೇನು; ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆಯ ಪ್ರಸ್ತುತ ಪ್ರಗತಿಯ ವಿವರಗಳೇನು; ಯೋಜನೆಯ ಪೂರ್ಣ ಅನುಷ್ಠಾನಕ್ಕೆ ಕಾಲಮಿತಿ ವಿಧಿಸಲಾಗಿದೆಯೇ? (ವಿವರ ನೀಡುವುದು) | ವಿವರಗಳನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ. |

**ಸಂಖ್ಯೆ: ಜಸಂಇ 68 ಡಬ್ಲ್ಯೂಎಲ್‌ಎ 2024**

**(ಡಿ.ಕೆ.ಶಿವಕುಮಾರ್)**
**ಉಪ ಮುಖ್ಯಮಂತ್ರಿಗಳು**

# ಅನುಬಂಧ–1

## ವಿಶ್ವೇಶ್ವರಯ್ಯ ಜಲ ನಿಗಮಕ್ಕೆ ಸಂಬಂಧಿಸಿದಂತೆ 2021-22ನೇ ಸಾಲಿನ ಆಯವ್ಯಯ ಘೋಷಣೆಗಳ ವಿವರ

| ಕ್ರ.ಸಂ | ಇಲಾಖೆ | ಕಂಡಿಕೆ ಸಂಖ್ಯೆ | ಘೋಷಣೆಗಳು | ಹೊಸ/ ಮಾರ್ಪಾಡಿತ/ ಮುಂದುವರೆದ /ಹೇಳಿಕೆ/ ನೀತಿ | ಸರ್ಕಾರಿ ಆದೇಶ ಸಂಖ್ಯೆ ಮತ್ತು ದಿನಾಂಕ | ಲೆಕ್ಕ ಶೀರ್ಷಿಕೆ (HoA) | ಪ್ರಸ್ತುತ ಹಂತ |
|---|---|---|---|---|---|---|---|
| 1 | 2 | 3 | 4 | 5 | 6 | 7 | 8 |
| 2 | ಜಲಸಂಪನ್ಮೂಲ | 86 | ಭದ್ರಾ ಮೇಲ್ದಂಡೆ ಯೋಜನೆಯ 21,474 ಕೋಟಿ ರೂ.ಗಳ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ. ಈ ಯೋಜನೆಯನ್ನು 'ರಾಷ್ಟ್ರೀಯ ಯೋಜನೆ ಎಂದು ಘೋಷಿಸುವ ಪ್ರಸ್ತಾವನೆಯು ಕೇಂದ್ರ ಸರ್ಕಾರದ Investment clearance ಪಡೆಯುವ ಹಂತದಲ್ಲಿರುತ್ತದೆ. ಕೇಂದ್ರದ ನೆರವಿನೊಂದಿಗೆ ಈ ಯೋಜನೆಯನ್ನು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು. ಇದರಿಂದ ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ ಹಾಗೂ ತುಮಕೂರು ಜಿಲ್ಲೆಗಳ ರೈತರಿಗೆ ಅನುಕೂಲವಾಗುತ್ತದೆ. | ಮುಂದುವರೆದ | ಜಸಂಇ 61 VBYE 2021 ದಿನಾಂಕ:10.01. 2023 | 4701 | ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, 2023-24ನೇ ಸಾಲಿಗೆ ಕೇಂದ್ರ ಆಯವ್ಯಯದಲ್ಲಿ ರೂ.5300ಕೋಟಿ ಅನುದಾನ ಘೋಷಿಸಲಾಗಿದೆ. ಅದರಂತೆ ಸದರಿ ಅನುದಾನವನ್ನು NP/AIBP ಯೋಜನೆಯಡಿ ಶೀಘ್ರವಾಗಿ ಬಿಡುಗಡೆ ಮಾಡುವಂತೆ ಪತ್ರಗಳ ಸಂಖ್ಯೆ: WRD 39 MBI 2021 ದಿನಾಂಕ: 16.08.2023 ಹಾಗೂ 19.06.2024 ಗಳಲ್ಲಿ ರಾಜ್ಯ ಸರ್ಕಾರವು ಕೋರಿದ್ದು, ಅನುದಾನ ನಿರೀಕ್ಷಿಸಲಾಗಿದೆ. |

| ಕ್ರ.ಸಂ | ಇಲಾಖೆ | ಕಂಡಿಕೆ ಸಂಖ್ಯೆ | ಘೋಷಣೆಗಳು | ಹೊಸ/ ಮಾರ್ಪಾಡಿತ/ ಮುಂದುವರೆದ /ಹೇಳಿಕೆ/ ನೀತಿ | ಸರ್ಕಾರಿ ಆದೇಶ ಸಂಖ್ಯೆ ಮತ್ತು ದಿನಾಂಕ | ಲೆಕ್ಕ ಶೀರ್ಷಿಕೆ (HoA) | ಪ್ರಸ್ತುತ ಹಂತ |
|---|---|---|---|---|---|---|---|
| 4 | ಜಲಸಂಪನ್ಮೂಲ | 88 | ಎತ್ತಿನಹೊಳೆ ಸಮಗ್ರ ಕುಡಿಯುವ ನೀರು ಯೋಜನೆಯ ಪ್ರಥಮ ಹಂತದ ಏತ ನೀರಾವರಿ ಕಾಮಗಾರಿಗಳು ಮುಕ್ತಾಯದ ಹಂತದಲ್ಲಿದ್ದು, ಬೈರಗೊಂಡ್ಲು ಜಲಾಶಯ ನಿರ್ಮಾಣಕ್ಕೆ ಅಡ್ಡಿಯಾಗಿರುವ ಭೂಸ್ವಾಧೀನ ಸಮಸ್ಯೆಗಳನ್ನು ನಿವಾರಿಸಿ, ಕಾಮಗಾರಿಗಳನ್ನು ಪೂರ್ಣಗೊಳಿಸಲು ಆದ್ಯತೆ ನೀಡಲಾಗುವುದು. | ಮುಂದುವರೆದ | ಜಸಂಇ 166 ವಿಬ್ಯಾಇ 2020 (ಭಾಗ-1) ದಿನಾಂಕ:16.12. 2020 | 4701 | • ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಮೊದಲನೇ ಹಂತದ ಏತ ಕಾಮಗಾರಿಗಳು ಬಹುತೇಕ ಪೂರ್ಣಗೊಳಿಸಿದ್ದು, ಈಗಾಗಲೇ ವಿಯರ್-4 & 5 ರಿಂದ ನೀರೆನ್ನೆತ್ತಿ ಪೂರ್ವ ಪರೀಕ್ಷಾರ್ಥ ಚಾಲನೆಗೊಳಿಸಿ (Pre Commissioning test) ವಿತರಣಾ ತೊಟ್ಟಿ-3 (DC-3) ರವರೆಗೆ ನೀರನ್ನು ಹರಿಸಲಾಗಿರುತ್ತದೆ. ಹಂತ-1ರ ಎಲ್ಲಾ ಲಿಫ್ಟ್ ಕಾಮಗಾರಿಗಳನ್ನು ಪೂರ್ಣಗೊಳಿಸಿ ಜುಲೈ-2024 ರ ಅಂತ್ಯಕ್ಕೆ 8 ವಿಯರ್‌ಗಳ ಪೈಕಿ 3 ವಿಯರ್‌ಗಳಿಂದ ನೀರೆನ್ನೆತ್ತಿ ಗುರುತ್ವ ಕಾಲುವೆಯ ಸರಪಳಿ:42.00 ಕಿ.ಮೀ.ವರೆಗೆ ನೀರನ್ನು ಹರಿಸಲು ಯೋಜಿಸಲಾಗಿದೆ. ಎರಡನೇ ಹಂತದಲ್ಲಿ ಸರಪಳಿ:0.00 ಕಿ.ಮೀ ರಿಂದ ಸರಪಳಿ: 261.69 ಕಿ.ಮೀ ವರೆಗಿನ ಗುರುತ್ವ ಕಾಲುವೆ ಪೈಕಿ ಈವರೆಗೂ 164.47ಕಿ.ಮೀ. ವರೆಗಿನ ಕಾಲುವೆ ನಿರ್ಮಾಣ ಕಾಮಗಾರಿಗಳು ಪೂರ್ಣಗೊಂಡಿದ್ದು, 25.87ಕಿ.ಮೀ ಉದ್ದದ ಗುರುತ್ವ ಕಾಲುವೆ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿದ್ದು, ಬಾಕಿ 62.17 ಕಿ.ಮೀ ಉದ್ದದ ಗುರುತ್ವ ಕಾಲುವೆ ನಿರ್ಮಾಣ ಕಾಮಗಾರಿಯನ್ನು ಅರಣ್ಯ ತೀರುವಳಿ, ರಾಷ್ಟ್ರೀಯ ಹೆದ್ದಾರಿ ಅನುಮತಿ, ರೈಲ್ವೇ ಇಲಾಖೆಯ ಅನುಮತಿ ಹಾಗೂ ಭೂಸ್ವಾಧೀನ ಪ್ರಕ್ರಿಯೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುವುದು.<br>• ಅಲ್ಲದೆ, ಸಮತೋಲನಾ ಜಲಾಶಯಕ್ಕಿಂತ ಮೊದಲು ಕವಲೊಡೆಯುವ ಟಿ.ಜಿ.ಹಳ್ಳಿ ಮತ್ತು ರಾಮನಗರ ಫೀಡರ್, ಮಧುಗಿರಿ ಫೀಡರ್ ಹಾಗೂ ಗೌರಿಬಿದನೂರು ಫೀಡರ್ ಕಾಲುವೆ ಕಾಮಗಾರಿಗಳನ್ನು 4 ಪ್ಯಾಕೇಜ್‌ಗಳಲ್ಲಿ ಗುತ್ತಿಗೆ ವಹಿಸಿಲಾಗಿದ್ದು, ಒಟ್ಟು 254.97 ಕಿ.ಮೀ ನಲ್ಲಿ 231.73 ಕಿ.ಮೀ ಕಾಮಗಾರಿಯು ಪೂರ್ಣಗೊಂಡಿದ್ದು, ಉಳಿಕೆ ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ.<br>• ಭೈರಗೊಂಡ್ಲು ಸಮತೋಲನಾ ಜಲಾಶಯ (Balancing Reservoir) ನಿರ್ಮಾಣ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಈಗಾಗಲೇ ಗುತ್ತಿಗೆ ವಹಿಸಲಾಗಿದ್ದು, ಭೂಸ್ವಾಧೀನ ಸಮಸ್ಯೆಯಿಂದ ಸ್ಥಗಿತಗೊಂಡಿರುತ್ತದೆ. ಪ್ರಸ್ತುತ ಪುನರ್ ಪರಿಷ್ಕೃತ ಯೋಜನಾ ವರದಿಯಂತೆ ಕಾಮಗಾರಿಯ ಬದಲಾದ ಸ್ವರೂಪಕ್ಕನುಗುಣವಾಗಿ ಕೊರಟಗೆರೆ ತಾಲ್ಲೂಕು ಭೈರಗೊಂಡ್ಲು ಗ್ರಾಮದ ಸಮೀಪದ ಸ್ಥಳದ ಬದಲಾಗಿ ದೊಡ್ಡಬಳ್ಳಾಪುರ ತಾಲ್ಲೂಕು ಲಕ್ಕೇನಹಳ್ಳಿ ಗ್ರಾಮದ ಸಮೀಪ ನಿರ್ಮಿಸಲು ಉದ್ದೇಶಿಸಿರುವ ಸಮತೋಲನಾ ಜಲಾಶಯ (Balancing Reservoir) ನಿರ್ಮಾಣ ಕಾಮಗಾರಿಯನ್ನು ನಿಗಮದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಅನುಮೋದನೆ ಪಡೆದುಕೊಂಡು ಗುತ್ತಿಗೆದಾರರಿಗೆ ಕರಾರು ವಹಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.<br>• ಬಾಕಿ ಇರುವ ಕಾಮಗಾರಿಗಳನ್ನು ಅನುದಾನದ ಲಭ್ಯತೆಯ ಅನುಸಾರ ಮಾರ್ಚ್ -2027ರ ಅಂತ್ಯಕ್ಕೆ ಪೂರ್ಣಗೊಳಿಸಲು ಆದ್ಯತೆ ಮೇಲೆ ಕ್ರಮವಹಿಸಲಾಗುತ್ತಿದೆ. |

# ವಿಶ್ವೇಶ್ವರಯ್ಯ ಜಲ ನಿಗಮಕ್ಕೆ ಸಂಬಂಧಿಸಿದಂತೆ 2022-23ನೇ ಸಾಲಿನ ಆಯವ್ಯಯ ಘೋಷಣೆಗಳ ವಿವರ

| ಕ್ರ.ಸಂ | ಇಲಾಖೆ | ಕಂಡಿಕೆ ಸಂಖ್ಯೆ | ಘೋಷಣೆಗಳು | ಹೊಸ/ ಮಾರ್ಪಾಡಿತ/ ಮುಂದುವರೆದ /ಹೇಳಿಕೆ/ ನೀತಿ | ಸರ್ಕಾರಿ ಆದೇಶ ಸಂಖ್ಯೆ ಮತ್ತು ದಿನಾಂಕ | ಲೆಕ್ಕ ಶೀರ್ಷಿಕೆ (HoA) | ಪ್ರಸ್ತುತ ಹಂತ |
|---|---|---|---|---|---|---|---|
| 1 | 2 | 3 | 4 | 5 | 6 | 7 | 8 |
| 3 | ಜಲಸಂಪನ್ಮೂಲ | 72 | ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಪರಿಗಣಿಸುವಂತೆ ಕೇಂದ್ರ ಸಚಿವ ಸಂಪುಟಕ್ಕೆ ಕೇಂದ್ರ ಜಲಶಕ್ತಿ ಮಂತ್ರಾಲಯದ High Power Steering Committeeಯು ಶಿಫಾರಸ್ಸು ಮಾಡಿದ್ದು, ಈ ಯೋಜನೆ "ರಾಷ್ಟ್ರೀಯ ಯೋಜನೆ" ಮಾನ್ಯತೆ ಪಡೆದು, ಕೇಂದ್ರ ನೆರವಿನೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ಚಿತ್ರದುರ್ಗ ಶಾಖಾ ಕಾಲುವೆಯ 60 ಕಿ.ಮೀ ವರೆಗಿನ ಕಾಮಗಾರಿಗಳನ್ನು ಪೂರ್ಣಗೊಳಿಸಿ ಹೊಳಲ್ಕೆರೆ ಫೀಡರ್ ಕಾಲುವೆಯಡಿ ಬರುವ 28 ಕೆರೆಗಳನ್ನು ತುಂಬಿಸಲು ಹಾಗೂ ತರೀಕೆರೆ ಏತ ನೀರಾವರಿ ಕಾಮಗಾರಿಗಳ ಅಡಿಯಲ್ಲಿ 20,150 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಹಾಗೂ 79 ಕೆರೆಗಳನ್ನು ತುಂಬಿಸಲು ಕ್ರಮ ವಹಿಸಲಾಗುವುದು. | ಮುಂದುವರೆದ | ಜಸಂಇ 61 VBYE 2021 ದಿನಾಂಕ:10.01. 2023 | 4701 | ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, 2023-24ನೇ ಸಾಲಿಗೆ ಕೇಂದ್ರ ಆಯವ್ಯಯದಲ್ಲಿ ರೂ.5300ಕೋಟಿ ಅನುದಾನ ಘೋಷಿಸಲಾಗಿದೆ. ಅದರಂತೆ ಸದರಿ ಅನುದಾನವನ್ನು NP/AIBP ಯೋಜನೆಯಡಿ ಶೀಘ್ರವಾಗಿ ಬಿಡುಗಡೆ ಮಾಡುವಂತೆ ಪತ್ರಗಳ ಸಂಖ್ಯೆ: WRD 39 MBI 2021 ದಿನಾಂಕ: 16.08.2023 ಹಾಗೂ 19.06.2024 ಗಳಲ್ಲಿ ರಾಜ್ಯ ಸರ್ಕಾರವು ಕೋರಿದ್ದು, ಅನುದಾನ ನಿರೀಕ್ಷಿಸಲಾಗಿದೆ.<br>ಚಿತ್ರದುರ್ಗ ಶಾಖಾ ಕಾಲುವೆಯ ಕಿ.ಮೀ 0.00 ರಿಂದ 134.597 ಕಿ.ಮೀ ರವರೆಗೆ ಒಟ್ಟು 134.597 ಕಿ.ಮೀ ಕಾಲುವೆ ಕಾಮಗಾರಿಯ ಪೈಕಿ 127.911 ಕಿ.ಮೀ ಕಾಲುವೆ ಅಗೆತ, 117.260 ಕಿ.ಮೀ ಸಿ.ಬಿ.ಎಲ್ ವರೆಗೆ ಕಾಲುವೆ ಅಗೆತ ಹಾಗೂ 101.841 ಕಿ.ಮೀ ಕಾಲುವೆ ಲೈನಿಂಗ್ ಕಾಮಗಾರಿಗಳು ಪೂರ್ಣಗೊಂಡಿರುತ್ತವೆ. ಬಾಕಿ ಕಾಮಗಾರಿಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುತ್ತವೆ ಹಾಗೂ ಹೊಳಲ್ಕೆರೆ ಫೀಡರ್ ಕಾಲುವೆ ಮುಖಾಂತರ 28 ಕೆರೆಗಳಿಗೆ ನೀರನ್ನು ಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>ತರೀಕೆರೆ ಏತ ನೀರಾವರಿ ಕಾಮಗಾರಿಗಳ ಅಡಿಯಲ್ಲಿ 12,000 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶವನ್ನು (Dry potential) ಸೃಜಿಸಲಾಗಿದ್ದು, ಬಾಕಿ ಉಳಿದ ಪ್ರದೇಶಕ್ಕೆ ಹನಿ ನೀರಾವರಿ ಹಾಗೂ 78 ಕೆರೆ ತುಂಬಿಸುವ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. |

| ಕ್ರ.ಸಂ | ಇಲಾಖೆ | ಕಂಡಿಕೆ ಸಂಖ್ಯೆ | ಘೋಷಣೆಗಳು | ಹೊಸ/ ಮಾರ್ಪಾಡಿತ/ ಮುಂದುವರೆದ /ಹೇಳಿಕೆ/ ನೀತಿ | ಸರ್ಕಾರಿ ಆದೇಶ ಸಂಖ್ಯೆ ಮತ್ತು ದಿನಾಂಕ | ಲೆಕ್ಕ ಶೀರ್ಷಿಕೆ (HoA) | ಪ್ರಸ್ತುತ ಹಂತ |
|---|---|---|---|---|---|---|---|
| 5 | ಜಲಸಂಪನ್ಮೂಲ | 74 | ರಾಜ್ಯದ ಮಹತ್ವಾಕಾಂಕ್ಷಿ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಪ್ರಥಮ ಹಂತದ ಕಾಮಗಾರಿಗಳನ್ನು ಪ್ರಸಕ್ತ ಸಾಲಿನಲ್ಲಿ ಪ್ರಾಯೋಗಿಕವಾಗಿ ಚಾಲನೆಗೊಳಿಸಲಾಗುವುದು. ಯೋಜನೆಯ ಎರಡನೇ ಹಂತದ 260 ಕಿ.ಮೀ. ಉದ್ದದ ಗುರುತ್ವ ಕಾಲುವೆ, ಟಿ.ಜಿ.ಹಳ್ಳಿ-ರಾಮನಗರ ಫೀಡರ್, ಮಧುಗಿರಿ ಫೀಡರ್ ಹಾಗೂ ಗೌರಿಬಿದನೂರು ಫೀಡರ್ ಕಾಲುವೆ ಕಾಮಗಾರಿಗಳನ್ನು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಿ, ಮುಂದಿನ ವರ್ಷದ ಮುಂಗಾರು ಹಂಗಾಮಿನಲ್ಲಿ ನೀರು ಪೂರೈಸಲು ಕ್ರಮ ಜರುಗಿಸಲು ಹಾಗೂ ಯೋಜನೆಯ ಉಳಿಕೆ ಕಾಮಗಾರಿಗಳನ್ನು ಹಂತ ಹಂತವಾಗಿ ಕಾರ್ಯಗತಗೊಳಿಸಲು ಕ್ರಮವಹಿಸಲಾಗುವುದು. | ಮುಂದುವರೆದ | ಜಸಂಇ 166 ವಿಬ್ಯಾಇ 2020 (ಭಾಗ-1) ದಿನಾಂಕ:16.12. 2020 | 4701 | • ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಮೊದಲನೇ ಹಂತದ ಏತ ಕಾಮಗಾರಿಗಳು ಬಹುತೇಕ ಪೂರ್ಣಗೊಳಿಸಿದ್ದು, ಈಗಾಗಲೇ ವಿಯರ್-4 & 5 ರಿಂದ ನೀರನ್ನೆತ್ತಿ ಪೂರ್ವ ಪರೀಕ್ಷಾರ್ಥ ಚಾಲನೆಗೊಳಿಸಿ (Pre Commissioning test) ವಿತರಣಾ ತೊಟ್ಟಿ-3 (DC-3) ರವರೆಗೆ ನೀರನ್ನು ಹರಿಸಲಾಗಿರುತ್ತದೆ. ಹಂತ-1ರ ಎಲ್ಲಾ ಲಿಫ್ಟ್ ಕಾಮಗಾರಿಗಳನ್ನು ಪೂರ್ಣಗೊಳಿಸಿ ಜುಲೈ-2024 ರ ಅಂತ್ಯಕ್ಕೆ 8 ವಿಯರ್‌ಗಳ ಪೈಕಿ 3 ವಿಯರ್‌ಗಳಿಂದ ನೀರನ್ನೆತ್ತಿ ಗುರುತ್ವ ಕಾಲುವೆಯ ಸರಪಳಿ:42.00 ಕಿ.ಮೀ.ವರೆಗೆ ನೀರನ್ನು ಹರಿಸಲು ಯೋಜಿಸಲಾಗಿದೆ. ಎರಡನೇ ಹಂತದಲ್ಲಿ ಸರಪಳಿ:0.00 ಕಿ.ಮೀ ರಿಂದ ಸರಪಳಿ: 261.69 ಕಿ.ಮೀ ವರೆಗಿನ ಗುರುತ್ವ ಕಾಲುವೆ ಪೈಕಿ ಈವರೆಗೂ 164.47ಕಿ.ಮೀ. ವರೆಗಿನ ಕಾಲುವೆ ನಿರ್ಮಾಣ ಕಾಮಗಾರಿಗಳು ಪೂರ್ಣಗೊಂಡಿದ್ದು, 25.87ಕಿ.ಮೀ ಉದ್ದದ ಗುರುತ್ವ ಕಾಲುವೆ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿದ್ದು, ಬಾಕಿ 62.17 ಕಿ.ಮೀ ಉದ್ದದ ಗುರುತ್ವ ಕಾಲುವೆ ನಿರ್ಮಾಣ ಕಾಮಗಾರಿಯನ್ನು ಅರಣ್ಯ ತೀರುವಳಿ, ರಾಷ್ಟ್ರೀಯ ಹೆದ್ದಾರಿ ಅನುಮತಿ, ರೈಲ್ವೇ ಇಲಾಖೆಯ ಅನುಮತಿ ಹಾಗೂ ಭೂಸ್ವಾಧೀನ ಪ್ರಕ್ರಿಯೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುವು.<br>• ಅಲ್ಲದೆ, ಸಮತೋಲನಾ ಜಲಾಶಯಕ್ಕಿಂತ ಮೊದಲು ಕವಲೊಡೆಯುವ ಟಿ.ಜಿ.ಹಳ್ಳಿ ಮತ್ತು ರಾಮನಗರ ಫೀಡರ್, ಮಧುಗಿರಿ ಫೀಡರ್ ಹಾಗೂ ಗೌರಿಬಿದನೂರು ಫೀಡರ್ ಕಾಲುವೆ ಕಾಮಗಾರಿಗಳನ್ನು 4 ಪ್ಯಾಕೇಜ್‌ಗಳಲ್ಲಿ ಗುತ್ತಿಗೆ ವಹಿಸಿಲಾಗಿದ್ದು, ಒಟ್ಟು 254.97 ಕಿ.ಮೀ ನಲ್ಲಿ 231.73 ಕಿ.ಮೀ ಕಾಮಗಾರಿಯು ಪೂರ್ಣಗೊಂಡಿದ್ದು, ಉಳಿಕೆ ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ.<br>• ಭೈರಗೊಂಡ್ಲು ಸಮತೋಲನಾ ಜಲಾಶಯ (Balancing Reservoir) ನಿರ್ಮಾಣ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಈಗಾಗಲೇ ಗುತ್ತಿಗೆ ವಹಿಸಲಾಗಿದ್ದು, ಭೂಸ್ವಾಧೀನ ಸಮಸ್ಯೆಯಿಂದ ಸ್ಥಗಿತಗೊಂಡಿರುತ್ತದೆ. ಪ್ರಸ್ತುತ ಪುನರ್ ಪರಿಷ್ಕೃತ ಯೋಜನಾ ವರದಿಯಂತೆ ಕಾಮಗಾರಿಯ ಬದಲಾದ ಸ್ವರೂಪಕ್ಕನುಗುಣವಾಗಿ ಕೊರಟಗೆರೆ ತಾಲ್ಲೂಕು ಭೈರಗೊಂಡ್ಲು ಗ್ರಾಮದ ಸಮೀಪದ ಸ್ಥಳದ ಬದಲಾಗಿ ದೊಡ್ಡಬಳ್ಳಾಪುರ ತಾಲ್ಲೂಕು ಲಕ್ಕೇನಹಳ್ಳಿ ಗ್ರಾಮದ ಸಮೀಪ ನಿರ್ಮಿಸಲು ಉದ್ದೇಶಿಸಿರುವ ಸಮತೋಲನಾ ಜಲಾಶಯ (Balancing Reservoir) ನಿರ್ಮಾಣ ಕಾಮಗಾರಿಯನ್ನು ನಿಗಮದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಅನುಮೋದನೆ ಪಡೆದುಕೊಂಡು ಗುತ್ತಿಗೆದಾರರಿಗೆ ಕರಾರು ವಹಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.<br>• ಬಾಕಿ ಇರುವ ಕಾಮಗಾರಿಗಳನ್ನು ಅನುದಾನದ ಲಭ್ಯತೆಯ ಅನುಸಾರ ಮಾರ್ಚ್ -2027ರ ಅಂತ್ಯಕ್ಕೆ ಪೂರ್ಣಗೊಳಿಸಲು ಆದ್ಯತೆ ಮೇಲೆ ಕ್ರಮವಹಿಸಲಾಗುತ್ತಿದೆ. |

## ವಿಶ್ವೇಶ್ವರಯ್ಯ ಜಲ ನಿಗಮಕ್ಕೆ ಸಂಬಂಧಿಸಿದಂತೆ 2023-24ನೇ ಸಾಲಿನ ಆಯವ್ಯಯ ಘೋಷಣೆಗಳ ವಿವರ (ಫೆಬ್ರವರಿ)

| ಕ್ರ.ಸಂ | ಇಲಾಖೆ | ಕಂಡಿಕೆ ಸಂಖ್ಯೆ | ಘೋಷಣೆಗಳು | ಹೊಸ/ ಮಾರ್ಪಾಡಿತ/ ಮುಂದುವರೆದ /ಹೇಳಿಕೆ/ ನೀತಿ | ಸರ್ಕಾರಿ ಆದೇಶ ಸಂಖ್ಯೆ ಮತ್ತು ದಿನಾಂಕ | ಲೆಕ್ಕ ಶೀರ್ಷಿಕೆ (HoA) | ಪ್ರಸ್ತುತ ಹಂತ |
|---|---|---|---|---|---|---|---|
| 1 | 2 | 3 | 4 | 5 | 6 | 7 | 8 |
| 1 | ಜಲಸಂಪನ್ಮೂಲ | 86 | ಕೇಂದ್ರ ಸರ್ಕಾರವು 2023-24ನೇ ಸಾಲಿನ ಆಯವ್ಯಯದಲ್ಲಿ ಚಿಕ್ಕಮಗಳುರು, ಚಿತ್ರದುರ್ಗ, ದಾವಣಗೆರೆ ಹಾಗೂ ತುಮಕೂರು ಜಿಲ್ಲೆಗಳ ರೈತರಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಭದ್ರಾ ಮೇಲ್ದಂಡೆ ಯೋಜನೆಗೆ ಪ್ರಸ್ತುಕ ಸರ್ಕಾರದ ತೀವ್ರ ಪ್ರಯತ್ನದ ಫಲವಾಗಿ "ರಾಷ್ಟ್ರೀಯ ಯೋಜನೆ" ಮಾನ್ಯತೆ ದೊರೆಯುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು 5300 ಕೋಟಿ ರೂ. ಸಹಾಯಧನ ಘೋಷಣೆ ಮಾಡಿದೆ. ಇದಕ್ಕಾಗಿ ರಾಜ್ಯದ ಜನತೆಯ ಪರವಾಗಿ ಸನ್ಮಾನ್ಯ ಪ್ರಧಾನ ಮಂತ್ರಿಗಳಿಗೆ ಹಾಗೂ ಕೇಂದ್ರ ಸರ್ಕಾರಕ್ಕೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಸದರಿ ಯೋಜನೆಯ ತೀವ್ರ ಅನುಷ್ಠಾನಕ್ಕೆ ರಾಜ್ಯ ಸರ್ಕಾರವು ಬದ್ಧವಾಗಿದೆ. | ಮುಂದುವರೆದ | ಜಸಂಇ 61 VBYE 2021 ದಿನಾಂಕ:10.01. 2023 | 4701 | ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, 2023-24ನೇ ಸಾಲಿಗೆ ಕೇಂದ್ರ ಆಯವ್ಯಯದಲ್ಲಿ ರೂ.5300ಕೋಟಿ ಅನುದಾನ ಘೋಷಿಸಲಾಗಿದೆ. ಅದರಂತೆ ಸದರಿ ಅನುದಾನವನ್ನು NP/AIBP ಯೋಜನೆಯಡಿ ಶೀಘ್ರವಾಗಿ ಬಿಡುಗಡೆ ಮಾಡುವಂತೆ ಪತ್ರಗಳ ಸಂಖ್ಯೆ: WRD 39 MBI 2021 ದಿನಾಂಕ: 16.08.2023 ಹಾಗೂ 19.06.2024 ಗಳಲ್ಲಿ ರಾಜ್ಯ ಸರ್ಕಾರವು ಕೋರಿದ್ದು, ಅನುದಾನ ನಿರೀಕ್ಷಿಸಲಾಗಿದೆ. |

| ಕ್ರ.ಸಂ | ಇಲಾಖೆ | ಕಂಡಿಕೆ ಸಂಖ್ಯೆ | ಘೋಷಣೆಗಳು | ಹೊಸ/ ಮಾರ್ಪಾಡಿತ/ ಮುಂದುವರೆದ /ಹೇಳಿಕೆ/ ನೀತಿ | ಸರ್ಕಾರಿ ಆದೇಶ ಸಂಖ್ಯೆ ಮತ್ತು ದಿನಾಂಕ | ಲೆಕ್ಕ ಶೀರ್ಷಿಕೆ (HoA) | ಪ್ರಸ್ತುತ ಹಂತ |
|---|---|---|---|---|---|---|---|
| 2 | ಜಲಸಂಪನ್ಮೂಲ | 87 | ರಾಜ್ಯದ ಮಹತ್ವಾಕಾಂಕ್ಷೆಯ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆ ಪ್ರಥಮ ಹಂತದ ಕಾಮಗಾರಿಗಳು ಬಹುತೇಕ ಪೂರ್ಣ ಗೊಳ್ಳುವ ಹಂತದಲ್ಲಿದ್ದು,ತುಮಕೂರು ಜಿಲ್ಲೆವರೆಗಿನ ಗುರುತ್ವ ಕಾಲುವೆ ಮತ್ತು ಫೀಡರ್ ಕಾಲುವೆ ಕಾಮಗಾರಿಗಳನ್ನು ಪೂರ್ಣಗೊಳಿಸಿ, 2023-24ರಲ್ಲಿ ನೀರು ಪೂರೈಸಲು ಉದ್ದೇಶಿಸಲಾಗಿದೆ. ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಕೆರೆಗಳಿಗೆ ನೀರನ್ನು ಪೂರೈಸುವ ಕಾಮಗಾರಿಗಳ ಹಾಗೂ ಶ್ರೀನಿವಾಸಪುರ ಮತ್ತು ಕೋಲಾರ ಪೀಡರ್ ಚಾನೆಲ್ ಗಳ ಕಾಮಗಾರಿಗಳಗೆ ಟೆಂಡರ್ ಕರೆಯಲಾಗಿದ್ದು, ಶೀಘ್ರದಲ್ಲಿಯೇ ಕಾಮಗಾರಿಗಳನ್ನು ಪ್ರಾರಂಭಿಸಿ ಪೂರ್ಣಗೊಳಿಸಲಾಗುವುದು. | ಮುಂದುವರೆದ | ಜಸಂಇ 61 VBYE 2021 ದಿನಾಂಕ:10.01. 2023 | 4701 | • ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಮೊದಲನೇ ಹಂತದ ಏತ ಕಾಮಗಾರಿಗಳು ಬಹುತೇಕ ಪೂರ್ಣಗೊಳಿಸಿದ್ದು, ಈಗಾಗಲೇ ವಿಯರ್-4 & 5 ರಿಂದ ನೀರನ್ನೆತ್ತಿ ಪೂರ್ವ ಪರೀಕ್ಷಾರ್ಥ ಚಾಲನೆಗೊಳಿಸಿ (Pre Commissioning test) ವಿತರಣಾ ತೊಟ್ಟಿ-3 (DC-3) ರವರೆಗೆ ನೀರನ್ನು ಹರಿಸಲಾಗಿರುತ್ತದೆ. ಹಂತ-1ರ ಎಲ್ಲಾ ಲಿಫ್ಟ್ ಕಾಮಗಾರಿಗಳನ್ನು ಪೂರ್ಣಗೊಳಿಸಿ ಜುಲೈ-2024 ರ ಅಂತ್ಯಕ್ಕೆ 8 ವಿಯರ್‌ಗಳ ಪೈಕಿ 3 ವಿಯರ್‌ಗಳಿಂದ ನೀರನ್ನೆತ್ತಿ ಗುರುತ್ವ ಕಾಲುವೆಯ ಸರಪಳಿ:42.00 ಕಿ.ಮೀ.ವರೆಗೆ ನೀರನ್ನು ಹರಿಸಲು ಯೋಜಿಸಲಾಗಿದೆ. ಎರಡನೇ ಹಂತದಲ್ಲಿ ಸರಪಳಿ:0.00 ಕಿ.ಮೀ ರಿಂದ ಸರಪಳಿ: 261.69 ಕಿ.ಮೀ ವರೆಗಿನ ಗುರುತ್ವ ಕಾಲುವೆ ಪೈಕಿ ಈವರೆಗೂ 164.47ಕಿ.ಮೀ. ವರೆಗಿನ ಕಾಲುವೆ ನಿರ್ಮಾಣ ಕಾಮಗಾರಿಗಳು ಪೂರ್ಣಗೊಂಡಿದ್ದು, 25.87ಕಿ.ಮೀ ಉದ್ದದ ಗುರುತ್ವ ಕಾಲುವೆ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿದ್ದು, ಬಾಕಿ 62.17 ಕಿ.ಮೀ ಉದ್ದದ ಗುರುತ್ವ ಕಾಲುವೆ ನಿರ್ಮಾಣ ಕಾಮಗಾರಿಯನ್ನು ಅರಣ್ಯ ತೀರುವಳಿ, ರಾಷ್ಟ್ರೀಯ ಹೆದ್ದಾರಿ ಅನುಮತಿ, ರೈಲ್ವೇ ಇಲಾಖೆಯ ಅನುಮತಿ ಹಾಗೂ ಭೂಸ್ವಾಧೀನ ಪ್ರಕ್ರಿಯೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುವು.<br>• ಅಲ್ಲದೆ, ಸಮತೋಲನಾ ಜಲಾಶಯಕ್ಕಿಂತ ಮೊದಲು ಕವಲೊಡೆಯುವ ಟಿ.ಜಿ.ಹಳ್ಳಿ ಮತ್ತು ರಾಮನಗರ ಫೀಡರ್, ಮಧುಗಿರಿ ಫೀಡರ್ ಹಾಗೂ ಗೌರಿಬಿದನೂರು ಫೀಡರ್ ಕಾಲುವೆ ಕಾಮಗಾರಿಗಳನ್ನು 4 ಪ್ಯಾಕೇಜ್‌ಗಳಲ್ಲಿ ಗುತ್ತಿಗೆ ವಹಿಸಿಲಾಗಿದ್ದು, ಒಟ್ಟು 254.97 ಕಿ.ಮೀ ನಲ್ಲಿ 231.73 ಕಿ.ಮೀ ಕಾಮಗಾರಿಯು ಪೂರ್ಣಗೊಂಡಿದ್ದು, ಉಳಿಕೆ ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ.<br>• ಭೈರಗೊಂಡ್ಲು ಸಮತೋಲನಾ ಜಲಾಶಯ (Balancing Reservoir) ನಿರ್ಮಾಣ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಈಗಾಗಲೇ ಗುತ್ತಿಗೆ ವಹಿಸಲಾಗಿದ್ದು, ಭೂಸ್ವಾಧೀನ ಸಮಸ್ಯೆಯಿಂದ ಸ್ಥಗಿತಗೊಂಡಿರುತ್ತದೆ. ಪ್ರಸ್ತುತ ಪುನರ್ ಪರಿಷ್ಕೃತ ಯೋಜನಾ ವರದಿಯಂತೆ ಕಾಮಗಾರಿಯ ಬದಲಾದ ಸ್ವರೂಪಕ್ಕನುಗುಣವಾಗಿ ಕೊರಟಗೆರೆ ತಾಲ್ಲೂಕು ಭೈರಗೊಂಡ್ಲು ಗ್ರಾಮದ ಸಮೀಪದ ಸ್ಥಳದ ಬದಲಾಗಿ ದೊಡ್ಡಬಳ್ಳಾಪುರ ತಾಲ್ಲೂಕು ಲಕ್ಕೇನಹಳ್ಳಿ ಗ್ರಾಮದ ಸಮೀಪ ನಿರ್ಮಿಸಲು ಉದ್ದೇಶಿಸಿರುವ ಸಮತೋಲನಾ ಜಲಾಶಯ (Balancing Reservoir) ನಿರ್ಮಾಣ ಕಾಮಗಾರಿಯನ್ನು ನಿಗಮದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಅನುಮೋದನೆ ಪಡೆದುಕೊಂಡು ಗುತ್ತಿಗೆದಾರರಿಗೆ ಕರಾರು ವಹಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.<br>• ಬಾಕಿ ಇರುವ ಕಾಮಗಾರಿಗಳನ್ನು ಅನುದಾನದ ಲಭ್ಯತೆಯ ಅನುಸಾರ ಮಾರ್ಚ್ -2027ರ ಅಂತ್ಯಕ್ಕೆ ಪೂರ್ಣಗೊಳಿಸಲು ಆದ್ಯತೆ ಮೇಲೆ ಕ್ರಮವಹಿಸಲಾಗುತ್ತಿದೆ. |

## ವಿಶ್ವೇಶ್ವರಯ್ಯ ಜಲ ನಿಗಮಕ್ಕೆ ಸಂಬಂಧಿಸಿದಂತೆ 2023-24ನೇ ಸಾಲಿನ ಆಯವ್ಯಯ ಘೋಷಣೆಗಳ ವಿವರ (ಜೂನ್)

| ಕ್ರ.ಸಂ | ಇಲಾಖೆ | ಕಂಡಿಕೆ ಸಂಖ್ಯೆ | ಘೋಷಣೆಗಳು | ಹೊಸ/ ಮಾರ್ಪಾಡಿತ/ ಮುಂದುವರೆದ /ಹೇಳಿಕೆ/ ನೀತಿ | ಸರ್ಕಾರಿ ಆದೇಶ ಸಂಖ್ಯೆ ಮತ್ತು ದಿನಾಂಕ | ಲೆಕ್ಕ ಶೀರ್ಷಿಕೆ (HoA) | ಪ್ರಸ್ತುತ ಹಂತ |
|---|---|---|---|---|---|---|---|
| 1 | 2 | 3 | 4 | 5 | 6 | 7 | 8 |
| 38 | ಜಲಸಂಪನ್ಮೂಲ | 76 | ನಮ್ಮ ಸರ್ಕಾರದ ಅವಧಿಯಲ್ಲಿ ತೀವ್ರಗತಿಯಲ್ಲಿ ಪೂರ್ಣಗೊಳಿಸಲು ಚಾಲನೆಗೊಳಿಸಿದ್ದ 12,912 ಕೋಟಿ ರೂ. ಮೊತ್ತದ ಎತ್ತಿನ ಹೊಳೆ ಯೋಜನೆಯನ್ನು ಹಿಂದಿನ ಸರ್ಕಾರವು ಸಕಾಲದಲ್ಲಿ ಪೂರ್ಣಗೊಳಿಸದ ಕಾರಣ ದರ ಹೆಚ್ಚಳಗೊಂಡು ಈ ಯೋಜನೆಯು 23,252 ಕೋಟಿ ರೂ. ಮೊತ್ತಕ್ಕೆ ಪರಿಷ್ಕೃತಗೊಂಡಿದೆ. ಯೋಜನೆಯಡಿ ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮವಹಿಸಿ ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ಬೆಂಗಳೂರು ಗ್ರಾಮಾಂತರ ಮತ್ತು ತುಮಕೂರು ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಸಲು ಆದ್ಯತೆಯ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದು. | ಮುಂದುವರೆದ | ಜಸಂಇ 61 VBYE 2021 ದಿನಾಂಕ:10.01. 2023 | 4701 | ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಮೊದಲನೇ ಹಂತದ ಏತ ಕಾಮಗಾರಿಗಳು ಬಹುತೇಕ ಪೂರ್ಣಗೊಳಿಸಿದ್ದು, ಈಗಾಗಲೇ ವಿಯರ್-4 & 5 ರಿಂದ ನೀರನ್ನೆತ್ತಿ ಪೂರ್ವ ಪರೀಕ್ಷಾರ್ಥ ಚಾಲನೆಗೊಳಿಸಿ (Pre Commissioning test) ವಿತರಣಾ ತೊಟ್ಟಿ-3 (DC-3) ರವರೆಗೆ ನೀರನ್ನು ಹರಿಸಲಾಗಿರುತ್ತದೆ. ಹಂತ-1ರ ಎಲ್ಲಾ ಲಿಫ್ಟ್ ಕಾಮಗಾರಿಗಳನ್ನು ಪೂರ್ಣಗೊಳಿಸಿ ಜುಲೈ-2024 ರ ಅಂತ್ಯಕ್ಕೆ 8 ವಿಯರ್‌ಗಳ ಪೈಕಿ 3 ವಿಯರ್‌ಗಳಿಂದ ನೀರನ್ನೆತ್ತಿ ಗುರುತ್ವ ಕಾಲುವೆಯ ಸರಪಳಿ:42.00 ಕಿ.ಮೀ.ವರೆಗೆ ನೀರನ್ನು ಹರಿಸಲು ಯೋಜಿಸಲಾಗಿದೆ. ಬಾಕಿ ಇರುವ ಕಾಮಗಾರಿಗಳನ್ನು ಅನುದಾನದ ಲಭ್ಯತೆಯ ಅನುಸಾರ ಮಾರ್ಚ್ -2027ರ ಅಂತ್ಯಕ್ಕೆ ಪೂರ್ಣಗೊಳಿಸಲು ಆದ್ಯತೆ ಮೇಲೆ ಕ್ರಮವಹಿಸಲಾಗುತ್ತಿದೆ. |
| 40 | ಜಲಸಂಪನ್ಮೂಲ | 78 | ಮಧ್ಯ ಕರ್ನಾಟಕದ ಪ್ರಮುಖ ಯೋಜನೆಯಾದ ಭದ್ರಾ ಮೇಲ್ದಂಡೆ ಯೋಜನೆಯನ್ನು ಡಬಲ್ ಇಂಜಿನ್ ಎಂದು ಹೇಳಿಕೊಳ್ಳುವ ಸರ್ಕಾರವಿದ್ದಾಗ್ಯೂ, ರಾಷ್ಟ್ರೀಯ ಯೋಜನೆಯನ್ನಾಗಿ ಇಲ್ಲಿಯವರೆಗೂ ಅಧಿಕೃತವಾಗಿ ಅನುಮೋದಿಸಿರುವುದಿಲ್ಲ. ಕೇಂದ್ರ ಸರ್ಕಾರವು 2023-24ನೇ ಸಾಲಿನ ತನ್ನ ಆಯವ್ಯಯದಲ್ಲಿ 5,300 ಕೋಟಿ ರೂ.ಗಳ ಅನುದಾನವನ್ನು ಭದ್ರಾ ಯೋಜನೆಗೆ ಘೋಷಿಸಿದ್ದು ಸದರಿ ಅನುದಾನವನ್ನು ಶೀಘ್ರವಾಗಿ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಿ ಯೋಜನೆಯ ಅನುಷ್ಠಾನಕ್ಕೆ ಆದ್ಯತೆಯ ಮೇಲೆ ಕ್ರಮವಹಿಸಲಾಗುವುದು. | ಮುಂದುವರೆದ | ಜಸಂಇ 166 ವಿಬ್ಯಾಇ 2020 (ಭಾಗ-1) ದಿನಾಂಕ:16.12. 2020 | 4701 | ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, 2023-24ನೇ ಸಾಲಿಗೆ ಕೇಂದ್ರ ಆಯವ್ಯಯದಲ್ಲಿ ರೂ.5300ಕೋಟಿ ಅನುದಾನ ಘೋಷಿಸಲಾಗಿದೆ. ಅದರಂತೆ ಸದರಿ ಅನುದಾನವನ್ನು NP/AIBP ಯೋಜನೆಯಡಿ ಶೀಘ್ರವಾಗಿ ಬಿಡುಗಡೆ ಮಾಡುವಂತೆ ಪತ್ರಗಳ ಸಂಖ್ಯೆ: WRD 39 MBI 2021 ದಿನಾಂಕ: 16.08.2023 ಹಾಗೂ 19.06.2024 ಗಳಲ್ಲಿ ರಾಜ್ಯ ಸರ್ಕಾರವು ಕೋರಿದ್ದು, ಅನುದಾನ ನಿರೀಕ್ಷಿಸಲಾಗಿದೆ. |

## ವಿಶ್ವೇಶ್ವರಯ್ಯ ಜಲ ನಿಗಮಕ್ಕೆ ಸಂಬಂಧಿಸಿದಂತೆ 2024-25ನೇ ಸಾಲಿನ ಆಯವ್ಯಯ ಘೋಷಣೆಗಳ ವಿವರ

| ಕ್ರ.ಸಂ | ಇಲಾಖೆ | ಕಂಡಿಕೆ ಸಂಖ್ಯೆ | ಘೋಷಣೆಗಳು | ಹೊಸ/ ಮಾರ್ಪಾಡಿತ/ ಮುಂದುವರೆದ /ಹೇಳಿಕೆ/ ನೀತಿ | ಸರ್ಕಾರಿ ಆದೇಶ ಸಂಖ್ಯೆ ಮತ್ತು ದಿನಾಂಕ | ಲೆಕ್ಕ ಶೀರ್ಷಿಕೆ (HoA) | ಪ್ರಸ್ತುತ ಹಂತ |
|---|---|---|---|---|---|---|---|
| 1 | 2 | 3 | 4 | 5 | 6 | 7 | 8 |
| 47 | ಜಲಸಂಪನ್ಮೂಲ | 75 | ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿ ದೊಡ್ಡನಗರದ ಬಳಿಯ ವಿತರಣಾ ತೊಟ್ಟಿಯವರೆಗೆ ಪೂರ್ವ ಪರೀಕ್ಷಾರ್ಥವಾಗಿ(Pre Commissioning test) ನೀರು ಹರಿಸಿ ಚಾಲನೆಗೊಳಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಯೋಜನೆಯ ಎಲ್ಲಾ ಲಿಫ್ಟ್ ಕಾಮಗಾರಿಗಳನ್ನು ಪೂರ್ಣಗೊಳಿಸಿ ಗುರುತ್ವ ಕಾಲುವೆಗೆ ನೀರು ಹರಿಸಲಾಗುವುದರ ಜೊತೆ ಸಮತೋಲನಾ ಜಲಾಶಯದ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು. | ಮುಂದುವರೆದ | ಜಸಂಇ 61 VBYE 2021 ದಿನಾಂಕ:10.01. 2023 | 4701 | ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಮೊದಲನೇ ಹಂತದ ಏತ ಕಾಮಗಾರಿಗಳು ಬಹುತೇಕ ಪೂರ್ಣಗೊಳಿಸಿದ್ದು, ಈಗಾಗಲೇ ವಿಯರ್-4 & 5 ರಿಂದ ನೀರನ್ನೆತ್ತಿ ಪೂರ್ವ ಪರೀಕ್ಷಾರ್ಥ ಚಾಲನೆಗೊಳಿಸಿ (Pre Commissioning test) ವಿತರಣಾ ತೊಟ್ಟಿ-3 (DC-3) ರವರೆಗೆ ನೀರನ್ನು ಹರಿಸಲಾಗಿರುತ್ತದೆ. ಹಂತ-1ರ ಎಲ್ಲಾ ಲಿಫ್ಟ್ ಕಾಮಗಾರಿಗಳನ್ನು ಪೂರ್ಣಗೊಳಿಸಿ ಜುಲೈ-2024 ರ ಅಂತ್ಯಕ್ಕೆ 8 ವಿಯರ್‌ಗಳ ಪೈಕಿ 3 ವಿಯರ್‌ಗಳಿಂದ ನೀರನ್ನೆತ್ತಿ ಗುರುತ್ವ ಕಾಲುವೆಯ ಸರಪಳಿ:42.00 ಕಿ.ಮೀ.ವರೆಗೆ ನೀರನ್ನು ಹರಿಸಲು ಯೋಜಿಸಲಾಗಿದೆ. ಜೊತೆಗೆ ಲಕ್ಕೇನಹಳ್ಳಿ ಸಮತೋಲನಾ ಜಲಾಶಯದ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಜರುಗಿಸಲಾಗುತ್ತಿದೆ. |

| ಕ್ರ.ಸಂ | ಇಲಾಖೆ | ಕಂಡಿಕೆ ಸಂಖ್ಯೆ | ಘೋಷಣೆಗಳು | ಹೊಸ/ ಮಾರ್ಪಾಡಿತ/ ಮುಂದುವರೆದ /ಹೇಳಿಕೆ/ ನೀತಿ | ಸರ್ಕಾರಿ ಆದೇಶ ಸಂಖ್ಯೆ ಮತ್ತು ದಿನಾಂಕ | ಲೆಕ್ಕ ಶೀರ್ಷಿಕೆ (HoA) | ಪ್ರಸ್ತುತ ಹಂತ |
|---|---|---|---|---|---|---|---|
| 49 | **ಜಲಸಂಪನ್ಮೂಲ** | 77 | ಭದ್ರಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರವು ತನ್ನ 2023-24ನೇ ಸಾಲಿನ ಆಯವ್ಯಯದಲ್ಲಿ 5300 ಕೋಟಿ ರೂ. ಅನುದಾನ ಘೋಷಿಸಲಾಗಿತ್ತು. ಆದರೆ ಈವರೆಗೆ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. ಹಾಗೆಯೇ ಹಿಂದಿನ ರಾಜ್ಯ ಸರ್ಕಾರ ತನ್ನ ಆಯವ್ಯಯ ಘೋಷಣೆಯಲ್ಲಿ ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಮಾನ್ಯತೆ ನೀಡಲಾಗಿರುತ್ತಿರುವುದರಿಂದ ಮಾನ್ಯ ಪ್ರಧಾನಮಂತ್ರಿಗಳಿಗೆ ಅಭಿನಂದನೆಗಳನ್ನು ತಿಳಿಸಲಾಗಿತ್ತು. ಆದರೆ ಈವರೆಗೆ ರಾಷ್ಟ್ರೀಯ ಯೋಜನೆಯಾಗಿ ಕೇಂದ್ರ ಸರ್ಕಾರವು ಘೋಷಿಸದೆ ಇರುವುದರಿಂದ ಇದು ಹುಸಿಯಾದ ಘೋಷಣೆಯಾಗಿದೆ. ಪ್ರಸಕ್ತ ಸಾಲಿನಲ್ಲಿ ಈ ಯೋಜನೆಯಡಿ ರಾಜ್ಯ ಸರ್ಕಾರವು ಚಿತ್ರದುರ್ಗ ಜಿಲ್ಲೆಯ ಸುಮಾರು 75000 ಎಕರೆ ನೀರಾವರಿ ಸಾಮರ್ಥ್ಯ ಕಲ್ಪಿಸಲು ಯೋಜಿಸಿದ್ದು, ಆಯವ್ಯಯದಲ್ಲಿ ಘೋಷಿಸಿದಂತೆ ಅನುದಾನವನ್ನು ಬಿಡುಗಡೆ ಮಾಡಿ ಯೋಜನೆಯನ್ನು ರೈತರಿಗೆ ತಲುಪಿಸಲು ಸಹಕಾರಿಯಾಗುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುವುದು. | ಮುಂದುವರೆದ | ಜಸಂಇ 166 ವಿಬ್ಯಾಇ 2020 (ಭಾಗ-1) ದಿನಾಂಕ:16.12. 2020 | 4701 | ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, 2023-24ನೇ ಸಾಲಿಗೆ ಕೇಂದ್ರ ಆಯವ್ಯಯದಲ್ಲಿ ರೂ.5300ಕೋಟಿ ಅನುದಾನ ಘೋಷಿಸಲಾಗಿದೆ. ಅದರಂತೆ ಸದರಿ ಅನುದಾನವನ್ನು NP/AIBP ಯೋಜನೆಯಡಿ ಶೀಘ್ರವಾಗಿ ಬಿಡುಗಡೆ ಮಾಡುವಂತೆ ಪತ್ರಗಳ ಸಂಖ್ಯೆ: WRD 39 MBI 2021 ದಿನಾಂಕ: 16.08.2023 ಹಾಗೂ 19.06.2024 ಗಳಲ್ಲಿ ರಾಜ್ಯ ಸರ್ಕಾರವು ಕೋರಿದ್ದು, ಅನುದಾನ ನಿರೀಕ್ಷಿಸಲಾಗಿದೆ. |
| 54 | **ಜಲಸಂಪನ್ಮೂಲ** | 82 | ಪಾವಗಡ ಸೋಲಾರ್ ಪಾರ್ಕ್ ಮಾದರಿಯಲ್ಲಿ ಜಲಸಂಪನ್ಮೂಲ ಇಲಾಖೆಯ ಮಾಲೀಕತ್ವವಿರುವ ಜಮೀನಿನಲ್ಲಿ ಮತ್ತು ಜಲಾಶಯಗಳ ಹಿನ್ನೀರಿನಲ್ಲಿ ಸೂಕ್ತ ಮಾದರಿಯ ಸೋಲಾರ್ ಪಾರ್ಕ್‌ಗಳನ್ನು ಸ್ಥಾಪಿಸುವ ಯೋಜನೆಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಕೈಗೆತ್ತಿಕೊಳ್ಳಲಾಗುವುದು. | ಹೊಸ | - | - | ಪಾವಗಡ ಸೋಲಾರ್ ಪಾರ್ಕ್ ಮಾದರಿಯಲ್ಲಿ ಜಲಸಂಪನ್ಮೂಲ ಇಲಾಖೆಯ ಮಾಲೀಕತ್ವವಿರುವ ಜಮೀನಿನಲ್ಲಿ ಮತ್ತು ಜಲಾಶಯಗಳ ಹಿನ್ನೀರಿನಲ್ಲಿ ಸೂಕ್ತ ಮಾದರಿಯ ಸೋಲಾರ್ ಪಾರ್ಕ್‌ಗಳನ್ನು ಸ್ಥಾಪಿಸುವ ಯೋಜನೆಯನ್ನು Captive/Group Captive ಮೂಲಕ ಸೋಲಾರ್ ಪಾರ್ಕ್ ಅನ್ನು ಸ್ಥಾಪಿಸಲು ಜಲಸಂಪನ್ಮೂಲ ಇಲಾಖೆಯ ವಿವಿಧ ನಿಗಮಗಳಾದ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಕಾವೇರಿ ನೀರಾವರಿ ನಿಗಮ ನಿಯಮಿತ ಮತ್ತು ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತಗಳನ್ನು ಒಳಗೊಂಡ ಜಂಟಿ ಸಹಭಾಗಿತ್ವ ಸಂಸ್ಥೆಯೊಂದನ್ನು ರಚಿಸಲು ಸರ್ಕಾರದ ಆದೇಶ ಸಂಖ್ಯೆ: ಜಸಂಇ 18 ಎಂಬಿಐ 2024, ಬೆಂಗಳೂರು, ದಿನಾಂಕ: 15.03.2024 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿ ಅದೇಶ ಹೊರಡಿಸಲಾಗಿದೆ. ಮುಂದುವರೆದು, ಸರ್ಕಾರದ ಮಟ್ಟದಲ್ಲಿ ನಾಲ್ಕೂ ನಿಗಮಗಳ ಹಾಗೂ ಮೆ:iDeck ಸಂಸ್ಥೆಯ ಪ್ರತಿನಿಧಿಯನ್ನೊಳಗೊಂಡ ಸಭೆಯೊಂದನ್ನು ಜರುಗಿಸಲು ಈ ಕಛೇರಿ ಪತ್ರ ಸಂಖ್ಯೆ: 44, ದಿನಾಂಕ: 01.04.2024 ರಲ್ಲಿ ಕೋರಲಾಗಿರುತ್ತದೆ. |

ವ್ಯವಸ್ಥಾಪಕ ನಿರ್ದೇಶಕರು
ವಿಜನಿನಿ, ಬೆಂಗಳೂರು.

# ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 114(1021) ಕ್ಕೆ ಅನುಬಂಧ-2

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯು ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ, ಪಶ್ಚಿಮಘಟ್ಟದ ಮೇಲ್ಭಾಗದಲ್ಲಿ ಹರಿಯುವ ಎತ್ತಿನಹೊಳೆ, ಕಾಡುಮನೆಹೊಳೆ, ಕೇರಿಹೊಳೆ ಮತ್ತು ಹೊಂಗದಹಳ್ಳದಿಂದ ಮುಂಗಾರು ಮಳೆ ಅವಧಿಯಲ್ಲಿ (139 ದಿನಗಳು) 24.01 ಟಿ.ಎಂ.ಸಿ ಪ್ರಮಾಣದ ಪ್ರವಾಹದ ನೀರನ್ನು 07 ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು, ಹಾಸನ ಹಾಗೂ ಚಿಕ್ಕಮಗಳೂರಿನ ಬರಪೀಡಿತ 29 ತಾಲ್ಲೂಕಿನ 38 ಪಟ್ಟಣ ಪ್ರದೇಶದ ಹಾಗೂ 6657 ಗ್ರಾಮಗಳ ಸುಮಾರು 75.59 ಲಕ್ಷ (Projected population for 2023-24) ಜನರಿಗೆ ಮತ್ತು ಜಾನುವಾರುಗಳಿಗೆ 14.064 ಟಿ.ಎಂ.ಸಿ ಕುಡಿಯುವ ನೀರನ್ನು ಒದಗಿಸುವುದು ಜೊತೆಗೆ 05 ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಹಾಸನ ಹಾಗೂ ತುಮಕೂರು ವ್ಯಾಪ್ತಿಯಲ್ಲಿ ಬರುವ 527 ಕೆರೆಗಳಿಗೆ 9.953 ಟಿ.ಎಂ.ಸಿ ಪ್ರಮಾಣದ ನೀರನ್ನು ಕೆರೆಗಳ ಸಾಮರ್ಥ್ಯದ ಶೇ.50% ರಷ್ಟು ತುಂಬಿಸಿ ಅಂತರ್ಜಲ ಮರುಪೂರಣ ಮಾಡುವುದು ಸದರಿ ಯೋಜನೆಯ ಉದ್ದೇಶವಾಗಿರುತ್ತದೆ.

ಸದರಿ ಯೋಜನೆಯ ರೂ.23,251.66 ಕೋಟಿ ಮೊತ್ತದ ಪುನರ್ ಪರಿಷ್ಕೃತ ಯೋಜನಾ ವರದಿಗೆ ಸರ್ಕಾರದ ಆದೇಶ ಸಂ: ಜಸಂಇ 61 ವಿಬ್ಯಾಇ 2022 ದಿನಾಂಕ: 10.01.2023 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

- ಮೊದಲನೇ ಹಂತದ ಏತ ಕಾಮಗಾರಿಗಳು ಮತ್ತು ವಿದ್ಯುತ್ ಪೂರೈಕೆ ಕಾಮಗಾರಿಗಳನ್ನು 7 ಪ್ಯಾಕೇಜ್‌ಗಳಲ್ಲಿ ಗುತ್ತಿಗೆ ಮೊತ್ತ ರೂ.4115.33 ಕೋಟಿಗಳಿಗೆ ಕೈಗೆತ್ತಿಕೊಳ್ಳಲಾಗಿದ್ದು, ಎಲ್ಲಾ ಕಾಮಗಾರಿಗಳು ಬಹುತೇಕ ಪೂರ್ಣಗೊಂಡಿದ್ದು, ವಿಯರ್- 4 & 5 ರಿಂದ ನೀರನ್ನೆತ್ತಿ ಈಗಾಗಲೇ ಪೂರ್ವ ಪರೀಕ್ಷಾರ್ಥ ಚಾಲನೆಗೊಳಿಸಲಾಗಿರುತ್ತದೆ. ಹಂತ-1ರ ಎಲ್ಲಾ ಲಿಫ್ಟ್ ಕಾಮಗಾರಿಗಳನ್ನು ಪೂರ್ಣಗೊಳಿಸಿ ಜುಲೈ-2024 ರ ಅಂತ್ಯಕ್ಕೆ 8 ವಿಯರ್ ಗಳ ಪೈಕಿ 3 ವಿಯರ್‌ಗಳಿಂದ ನೀರನ್ನೆತ್ತಿ ಗುರುತ್ವ ಕಾಲುವೆಯ ಸರಪಳಿ:42.00 ಕಿ.ಮೀ.ವರೆಗೆ ನೀರನ್ನು ಹರಿಸಲು ಉದ್ದೇಶಿಸಲಾಗಿದೆ.

- ಎರಡನೇ ಹಂತದಲ್ಲಿ ಸರಪಳಿ:0.00 ಕಿ.ಮೀ ರಿಂದ ಸರಪಳಿ:261.69 ಕಿ.ಮೀ ವರೆಗಿನ 252.61 ಕಿ.ಮೀ ಉದ್ದದ (ಮಾರ್ಗದ ಮಧ್ಯದಲ್ಲಿ ಸುಮಾರು 10.47 ಕಿ.ಮೀ ಉದ್ದದ ಮೇಲ್ಕಾಲುವೆ ಒಳಗೊಂಡಂತೆ) ಗುರುತ್ವ ಕಾಲುವೆ ನಿರ್ಮಾಣದ ಕಾಮಗಾರಿಗಳನ್ನು ರೂ.8638.37 ಕೋಟಿಗಳ ಮೊತ್ತದಲ್ಲಿ 34 ಪ್ಯಾಕೇಜುಗಳ ಮುಖಾಂತರ ಕೈಗೆತ್ತಿಕೊಳ್ಳಲಾಗಿದ್ದು, ಈ ಪೈಕಿ ಈವರೆಗೂ 164.47 ಕಿ.ಮೀ. ವರೆಗಿನ ಕಾಲುವೆ ನಿರ್ಮಾಣ ಕಾಮಗಾರಿಗಳು ಪೂರ್ಣಗೊಂಡಿದ್ದು, 25.87 ಕಿ.ಮೀ ಉದ್ದದ ಗುರುತ್ವ ಕಾಲುವೆ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿದ್ದು, ಬಾಕಿ 62.17 ಕಿ.ಮೀ ಉದ್ದದ ಗುರುತ್ವ ಕಾಲುವೆ ನಿರ್ಮಾಣ ಕಾಮಗಾರಿಯನ್ನು ಅರಣ್ಯ ತೀರುವಳಿ, ರಾಷ್ಟ್ರೀಯ ಹೆದ್ದಾರಿ ಅನುಮತಿ, ರೈಲ್ವೇ ಇಲಾಖೆಯ ಅನುಮತಿ ಹಾಗೂ ಭೂಸ್ವಾಧೀನ ಪ್ರಕ್ರಿಯೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುವುದರಿಂದ ಇಲ್ಲಿಯವರೆಗೆ ಪ್ರಾರಂಭಿಸಲು ಸಾಧ್ಯವಾಗಿರುವುದಿಲ್ಲ.

- ಅಲ್ಲದೆ, ಸಮತೋಲನಾ ಜಲಾಶಯಕ್ಕಿಂತ ಮೊದಲು ಕವಲೊಡೆಯುವ ಮಧುಗಿರಿ ಫೀಡರ್, ಟಿ.ಜಿ.ಹಳ್ಳಿ-ರಾಮನಗರ ಫೀಡರ್ ಹಾಗೂ ಗೌರಿಬಿದನೂರು ಫೀಡರ್ ಕಾಲುವೆ ಕಾಮಗಾರಿಗಳನ್ನು 4 ಪ್ಯಾಕೇಜ್‌ಗಳಲ್ಲಿ ಗುತ್ತಿಗೆ ಮೊತ್ತ ರೂ.3584.73 ಕೋಟಿಗಳಿಗೆ ಕೈಗೆತ್ತಿಕೊಳ್ಳಲಾಗಿದ್ದು, ಒಟ್ಟು 254.97 ಕಿ.ಮೀಗಳ ಪೈಕಿ 231.73 ಕಿ.ಮೀ ಕಾಮಗಾರಿಯು ಪೂರ್ಣಗೊಂಡಿದ್ದು, ಉಳಿಕೆ 23.24 ಕಿ.ಮೀ ಉದ್ದದ ಫೀಡರ್ ಪೈಪ್‌ಲೈನ್ ಕಾಮಗಾರಿಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುತ್ತವೆ.

- ಭೈರಗೊಂಡ್ಲು ಸಮತೋಲನಾ ಜಲಾಶಯ (Balancing Resrvoir) ನಿರ್ಮಾಣ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಈಗಾಗಲೇ ಗುತ್ತಿಗೆ ವಹಿಸಲಾಗಿದ್ದು, ಭೂಸ್ವಾಧೀನ ಸಮಸ್ಯೆಯಿಂದ ಸ್ಥಗಿತಗೊಂಡಿರುತ್ತದೆ. ಪ್ರಸ್ತುತ ಪುನರ್ ಪರಿಷ್ಕೃತ ಯೋಜನಾ ವರದಿಯಂತೆ ಕಾಮಗಾರಿಯ ಬದಲಾದ ಸ್ವರೂಪಕ್ಕನುಗುಣವಾಗಿ ಕೊರಟಗೆರೆ ತಾಲ್ಲೂಕು ಭೈರಗೊಂಡ್ಲು ಗ್ರಾಮದ ಸಮೀಪದ ಸ್ಥಳದ ಬದಲಾಗಿ ದೊಡ್ಡಬಳ್ಳಾಪುರ ತಾಲ್ಲೂಕು ಲಕ್ಕೇನಹಳ್ಳಿ ಗ್ರಾಮದ ಸಮೀಪ ನಿರ್ಮಿಸಲು ಉದ್ದೇಶಿಸಿರುವ ಸಮತೋಲನಾ ಜಲಾಶಯ (Balancing Resrvoir) ನಿರ್ಮಾಣ ಕಾಮಗಾರಿಯನ್ನು ನಿಗಮದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಅನುಮೋದನೆ ಪಡೆದುಕೊಂಡು ಗುತ್ತಿಗೆದಾರರಿಗೆ ಕರಾರು ವಹಿಸಲು ಅಗತ್ಯ ಕ್ರಮ ಜರುಗಿಸಲಾಗುತ್ತಿದೆ.

- ಪುನರ್ ಪರಿಷ್ಕೃತ ಯೋಜನಾ ವರದಿಯನ್ವಯ ಲಕ್ಕೇನಹಳ್ಳಿ ಸಮತೋಲನಾ ಜಲಾಶಯದ ನಂತರ ನೀರನ್ನು ಬೆಂಗಳೂರು ಗ್ರಾಮಾಂತರ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಪೂರೈಸಲು ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ.

- ಸಮತೋಲನಾ ಜಲಾಶಯದಿಂದ (ಲಕ್ಕೇನಹಳ್ಳಿ ಗ್ರಾಮದ ಬಳಿ) ವಿತರಣಾ ತೊಟ್ಟಿ-5 (Delivery chamber-5) ವರೆಗಿನ ಕೋಲಾರ ಲಿಫ್ಟ್ ಕಾಮಗಾರಿ ಹಾಗೂ ವಿತರಣಾ ತೊಟ್ಟಿ-5ರ (Delivery chamber-5) ನಂತರದ 22.30 ಕಿ.ಮೀ ವರೆಗಿನ ಗ್ರಾವಿಟಿ ಪೈಪ್ ಮೇನ್ ನಿರ್ಮಾಣ ಕಾಮಗಾರಿಗಳು 02 ಪ್ಯಾಕೇಜ್‌ಗಳಲ್ಲಿ ಪ್ರಗತಿಯಲ್ಲಿರುತ್ತವೆ.

- ಸ: 22.30 ಕಿ.ಮೀ ನಿಂದ ಸ:36.965 ಕಿ.ಮೀ ವರೆಗೆ ಗ್ರಾವಿಟಿ ಪೈಪ್ ಮೇನ್ ನಿರ್ಮಿಸುವ ಎರಡು ಪ್ಯಾಕೇಜ್ ಕಾಮಗಾರಿಗಳಿಗೆ (ಕೋಲಾರ್ ಪ್ಯಾಕೇಜ್-3 & 4) ಗುತ್ತಿಗೆದಾರರುಗಳೊಂದಿಗೆ ಕರಾರು ಒಪ್ಪಂದ ಮಾಡಿಕೊಳ್ಳಲಾಗಿದ್ದು, ಕಾಮಗಾರಿಗಳನ್ನು ಪ್ರಾರಂಭಿಸಬೇಕಿರುತ್ತದೆ.

- ಸ:36.965 ಕಿ.ಮೀ ನಿಂದ ಕವಲೊಡೆಯುವ ಕೋಲಾರ ಹಾಗೂ ಶ್ರೀನಿವಾಸಪುರ ಪೂರಕ ಕಾಲುವೆ ನಿರ್ಮಾಣ ಕಾಮಗಾರಿಗಳ ಪೈಕಿ ಕೋಲಾರ ಫೀಡರ್ ಕಾಮಗಾರಿಗಳಿಗೆ 2 ಪ್ಯಾಕೇಜ್‌ಗಳಲ್ಲಿ ಮತ್ತು ಶ್ರೀನಿವಾಸಪುರ ಫೀಡರ್ ಕಾಮಗಾರಿಗಳ 3 ಪ್ಯಾಕೇಜ್ ಕಾಮಗಾರಿಗಳಿಗೆ ಗುತ್ತಿಗೆದಾರರುಗಳೊಂದಿಗೆ ಕರಾರು ಒಪ್ಪಂದ ಮಾಡಿಕೊಳ್ಳಲಾಗಿದ್ದು, ಕಾಮಗಾರಿಗಳನ್ನು ಪ್ರಾರಂಭಿಸಬೇಕಿರುತ್ತದೆ.

- ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಗೆ ಜೂನ್-2024 ರ ಅಂತ್ಯದವರೆಗೆ ಒಟ್ಟಾರೆಯಾಗಿ ಸಂಚಿತ ರೂ.16,076.71 ಕೋಟಿ ಆರ್ಥಿಕ ಪ್ರಗತಿ ಸಾಧಿಸಲಾಗಿರುತ್ತದೆ. ಬಾಕಿ ಕಾಮಗಾರಿಗಳ ಅನುಷ್ಠಾನಕ್ಕಾಗಿ ರೂ.7174.95 ಕೋಟಿಗಳ ಅವಶ್ಯಕತೆಯಿರುತ್ತದೆ.

ಸದರಿ ಯೋಜನೆಯನ್ನು 2026-27ನೇ ಸಾಲಿನಲ್ಲಿ 31.03.2027ರ ಅಂತ್ಯಕ್ಕೆ ಅನುದಾನದ ಲಭ್ಯತೆಯ ಮೇರೆಗೆ ಸಂಪೂರ್ಣವಾಗಿ ಪೂರ್ಣಗೊಳಿಸಲು ಯೋಜಿಸಲಾಗಿದೆ.

*****